ಕನ್ನಡ ಪೋಸ್ಟ್

KANNADA POST ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 256 | Pages. 2 | Date: 24-08-2025, SUNDAY RNI NO: KARKAN/2024/89601 Kannada Daily

ಸಂಪುಟ : 01 - ಸಂಚಿಕೆ : 256 - ಪುಟಗಳು : 2 24-08-2025 ಭಾನುವಾರ Ph: 8762954248 ದರ : ₹1

ಕಾಂಗ್ರೆಸ್ ಕಾರ್ಯಕರ್ತರಿಂದ ಧರ್ಮ ಯಾತ್ರೆ

ಬಿಜೆಪಿ ರಾಜಕಾರಣ ಮಾಡಬಾರದು : ಮಾಜಿ ಎಂಎಲ್‌ಸಿ ಗೋಪಾಲಸ್ವಾಮಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಹಾಸನ: ಧರ್ಮಸ್ಥಳದಲ್ಲಿ ನೂರಾರು ಶವಗಳ ಹೂತು ಹಾಕಲಾಗಿದೆ ಎಂದು ಆರೋಪಿಸಿ ಕ್ಷೇತ್ರದ ವಿರುದ್ಧ ಅಪಪ್ರಚಾರ ಮಾಡಲಾಗುತ್ತಿದೆ ಎಂದು ಆರೋಪಿಸಿ ಶನಿವಾರ ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ. ಗೋಪಾಲಸ್ವಾಮಿ ನೇತೃತ್ವದಲ್ಲಿ ನೂರಾರು ಹಿಂದು ಕಾರ್ಯಕರ್ತರು ಧರ್ಮಸ್ಥಳ ಯಾತ್ರೆ ತೆರಳಿದರು.

ಚನ್ನರಾಯಪಟ್ಟಣ, ಹೊಳೆನರಸೀಪುರ, ಹಾಸನ, ಅರಸೀಕೆರೆ ಸೇರಿದಂತೆ ಜಿಲ್ಲೆಯ ವಿವಿಧ ಭಾಗದ ಜನರು ಪಾಲ್ಗೊಂಡರು. ಎಲ್ಲರೂ ಧರ್ಮ ಗೆಲ್ಲಬೇಕು, ನಾವೆಲ್ಲರೂ ಧರ್ಮಸ್ಥಳ, ಡಾ. ವೀರೇಂದ್ರ ಹೆಗ್ಗಡೆ ಅವರ ಪರ ಎಂದು ಘೋಷಣೆ ಕೂಗಿದರು.

ಬೂವನಹಳ್ಳಿ ಕೂಡಿನಲ್ಲಿ ಮಾತನಾಡಿದ ಗೋಪಾಲಸ್ವಾಮಿ, ನಾವೆಲ್ಲರೂ ಹಿಂದಿನಿಂದಲೂ ಧರ್ಮಸ್ಥಳದ ಮಂಜುನಾಥನನ್ನು ಅಪಾರವಾಗಿ ನಂಬಿರುವವರು. ಧಾರ್ಮಿಕವಾಗಿ ಅಪಾರ ನಂಬಿಕೆ ಹೊಂದಿದ್ದೇವೆ. ಯಾರೂ ಧಕ್ಕೆ ಉಂಟು ಮಾಡಬಾರದು.

ಧರ್ಮಸ್ಥಳದ ಪರವಾಗಿ, ವೀರೇಂದ್ರ ಹೆಗ್ಗಡೆ ಅವರನ್ನು ಬೆಂಬಲಿಸಿ ಇಂದು ಧರ್ಮಯಾತ್ರೆ ಹೊರಟಿದ್ದೇವೆ, ಮಂಜುನಾಥನ ದರ್ಶನ ಮಾಡಿ, ಹೆಗ್ಗಡೆ ಅವರಿಗೆ ಧೈರ್ಯ ಹೇಳಿ ವಾಪಸ್ ಬರುತ್ತೇವೆ ಎಂದರು.

ಸ್ತ್ರೀಶಕ್ತಿ ಸಂಘಗಳ ಸ್ಥಾಪನೆ, ಕೆರೆ ಅಭಿವೃದ್ಧಿ, ಹೈನುಗಾರಿಕೆಗೆ ಉತ್ತೇಜನ, ಶುದ್ಧ ಕುಡಿಯುವ ನೀರಿನ ಘಟಕ ಹೀಗೆ ಸರ್ಕಾರದ ರೀತಿಯಲ್ಲೇ ಹಲವು ಕೆಲಸ-ಕಾರ್ಯ ಹಾಗೂ ಮಹಿಳಾ ಸಬಲೀಕರಣವನ್ನು ಧರ್ಮಸ್ಥಳ ಸಂಸ್ಥೆ ಮಾಡುತ್ತಿದೆ. ಯಾವುದೇ ಆರೋಪ ಇರಲಿ ಅದರ ಸತ್ಯಾಸತ್ಯತೆ ಬಯಲಾಗಬೇಕು. ಆ ಕಾರಣಕ್ಕೆ ನಮ್ಮ ಸರ್ಕಾರ ಎಸ್‌ಐಟಿ ರಚನೆ ಮಾಡಿದೆ.

ಸಂಸದ ಶ್ರೇಯಸ್ ಬೆಂಬಲ

ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ನಮ್ಮ ಧರ್ಮ ಕಾಪಾಡುವುದು ನಮ್ಮೆಲ್ಲರ ಕರ್ತವ್ಯ. ಧರ್ಮಸ್ಥಳ, ಡಾ. ವೀರೇಂದ್ರ ಹೆಗ್ಗಡೆಯವರು ಸಮಾಜದ ಏಳಿಗೆಗೆ ಹಾಗೂ ಧರ್ಮ ಉಳಿಸಲು ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಅವರ ಹಲವು ರೀತಿಯ ಕೊಡುಗೆ ಪ್ರಶಂಸನೀಯ, ಹಾಗಾಗಿ ಧರ್ಮ ಉಳಿಯಬೇಕು. ನಾವೆಲ್ಲರೂ ಸದಾ ಧರ್ಮಸ್ಥಳ ಮತ್ತು ವೀರೇಂದ್ರ ಹೆಗ್ಗಡೆ ಅವರ ಜೊತೆ ಇರುತ್ತೇವೆ ಎಂದು ಹೇಳಿದರು. ಇದೇ ರೀತಿ ಎಲ್ಲ ತಾಲೂಕುಗಳಿಂದ ಸಂಘಟನೆಯಾಗಿ ವೀರೇಂದ್ರ ಹೆಗ್ಗಡೆ ಅವರಿಗೆ ಕೈಜೋಡಿಸಬೇಕು ಎಂದರು.

ವಕೀಲರಿಂದಲೂ ಧರ್ಮಯಾತ್ರೆ

ಮತ್ತೊಂದೆಡೆ ಧರ್ಮಸ್ಥಳದ ವಿರುದ್ಧ ಅಪಪ್ರಚಾರ ಖಂಡಿಸಿ ನೂರಾರು ವಕೀಲರೂ ಸಹ ಶ್ರೀ ಕ್ಷೇತ್ರಕ್ಕೆ ಧರ್ಮಯಾತ್ರೆ ಕೈಗೊಂಡರು. ನಗರದ ಸರ್ಕಾರಿ ಎಂಜಿನಿಯರಿಂಗ್ ಕಾಲೇಜು ಬಳಿಯಿಂದ ವಕೀಲರ ನಡೆ ಧರ್ಮಸ್ಥಳದ ಕಡೆ ಎಂಬ ಘೋಷಣೆಯೊಂದಿಗೆ ವಕೀಲರ ಸಮೂಹ ನೂರಾರು ಕಾರುಗಳಲ್ಲಿ ತೆರಳಿತು. ಜಿಲ್ಲಾ ವಕೀಲರ ಸಂಘದ ನೇತೃತ್ವದಲ್ಲಿ ಧರ್ಮಸ್ಥಳಕ್ಕೆ ಪ್ರಯಾಣ ಬೆಳೆಸಲಾಯಿತು. ಈ ವೇಳೆ ಮಹೇಶ್‌ಶೆಟ್ಟಿ ತಿಮರೋಡಿ, ಗಿರೀಶ್ ಮಟ್ಟಣ್ಣನವರ್, ಎಂ.ಡಿ. ಸಮೀರ್ ಮೊದಲಾದವರು ಸೇರಿ ಧರ್ಮಸ್ಥಳದ ವಿರುದ್ಧ ಸಂಚು ರೂಪಿಸಿರುವುದು ಈಗ ಬಯಲಾಗಿದೆ. ವಕೀಲರು ಯಾವತ್ತೂ ಧರ್ಮಸ್ಥಳದ ಜೊತೆಗಿದ್ದೇವೆ ಎಂದರು.

ವಕೀಲರ ಸಂಘದ ಅಧ್ಯಕ್ಷ ಮೊಗಣ್ಣಗೌಡ ಮಾತನಾಡಿ, ಸಂಚು ರೂಪಿಸಿದವರ ವಿರುದ್ಧ ಕ್ರಮ ಆಗಲಿ ಎಂದು ಒತ್ತಾಯಿಸಿದರು. ನಂತರ ಬೆಂಗಳೂರಿನಿಂದ ಆಗಮಿಸಿದ್ದ ವಕೀಲರ ಜೊತೆ ಜಿಲ್ಲೆಯವರೂ ಸೇರಿ ಮಂಜುನಾಥನ ಸನ್ನಿಧಿಯತ್ತ ಹೊರಟರು.

ಆದರೆ ವಿಪಕ್ಷ ಬಿಜೆಪಿ ಟೀಕೆ ಮಾಡುವುದು, ರಾಜಕೀಯ ಪ್ರೇರಿತವಾಗಿ ಅಪಪ್ರಚಾರ ಮಾಡುವುದು ಸರಿಯಲ್ಲ ಎಂದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಭಕ್ತನಾಗಿ ಧರ್ಮಸ್ಥಳದ ವಿರುದ್ಧ ಷಡ್ಯಂತ್ರ ನಡೆಯುತ್ತಿದೆ ಎಂದು ಮಾತನಾಡಿದ್ದಾರೆ. ಆದರೆ ಅವರು ರಾಜಕೀಯ ಬೆರೆಸಿಲ್ಲ. ಈ ವಿಚಾರದಲ್ಲಿ ರಾಜಕೀಯ ಮಾಡುತ್ತಿರುವುದು ಬಿಜೆಪಿ ಎಂದು ವಾಗ್ದಾಳಿ ನಡೆಸಿದರು.

ನಾನು ರಾಜಕಾರಣಿಯಾಗಿ ಅಲ್ಲ, ಒಬ್ಬ ಭಕ್ತನಾಗಿ ಧರ್ಮಯಾತ್ರೆ ಕೈಗೊಂಡಿದ್ದೇನೆ. ಕೋಟಿ ಕೋಟಿ ಜನರ ಭಕ್ತಿಯ ಕೇಂದ್ರವಾಗಿರುವ ಧರ್ಮಸ್ಥಳದ ವಿರುದ್ಧ ಯಾರೂ ಕೂಡ ಷಡ್ಯಂತ್ರ ಮಾಡಬಾರದು ಎಂದು ಮನವಿ ಮಾಡಿದರು. ಅಪ ಪ್ರಚಾರ ಮಾಡಿದವರ ವಿರುದ್ಧ ಕ್ರಮ ಆಗಬೇಕು ಎಂದು ಗೋಪಾಲಸ್ವಾಮಿ ಆಗ್ರಹಿಸಿದರು.

ನಾವೆಲ್ಲರೂ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಾಗಿ ಶ್ರೀಕ್ಷೇತ್ರಕ್ಕೆ ಹೋಗುತ್ತಿಲ್ಲ. ಬದಲಾಗಿ ಭಕ್ತರಾಗಿ ತೆರಳುತ್ತಿದ್ದೇವೆ. ಡಾ. ವೀರೇಂದ್ರ ಹೆಗ್ಗಡೆ ಅವರ ಎಲ್ಲ ರೀತಿಯ ಕಾರ್ಯ ಏನೆಂದು ಇಡೀ ನಾಡಿಗೆ ತಿಳಿದಿದೆ. ಅವರ ಜೊತೆಗೆ ನಾವಿದ್ದೇವೆ ಎಂದು ಹೇಳುವುದು ನಮ್ಮ ಯಾತ್ರೆಯ ಉದ್ದೇಶ ಎಂದರು.

ಅಪಪ್ರಚಾರದಿಂದ ಭಕ್ತರ ಮನಸ್ಸಿಗೆ ಘಾಸಿ: ಶಾಸಕ ಸತೀಶ್ ರೆಡ್ಡಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಸಕಲೇಶಪುರ: ಧರ್ಮಸ್ಥಳದ ವಿರುದ್ಧ ನಡೆಯುತ್ತಿರುವ ಅಪಪ್ರಚಾರ ಭಕ್ತರ ಮನಸ್ಸಿಗೆ ಘಾಸಿ ಉಂಟುಮಾಡಿದೆ ಎಂದು ಬೊಮ್ಮನಹಳ್ಳಿ ಶಾಸಕ ಸತೀಶ್ ರೆಡ್ಡಿ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಕೆಂಪೇಗೌಡ ಪ್ರತಿಮೆ ಬಳಿ ಶನಿವಾರ ಆಗಮಿಸಿದ ಧರ್ಮಸ್ಥಳ ಸಂರಕ್ಷಣೆ ಯಾತ್ರೆ ವೇಳೆ ಮಾತನಾಡಿ, ವ್ಯವಸ್ಥಿತ ?ಡ್ಯಂತ್ರದ ಮೂಲಕ ಶ್ರೀಕ್ಷೇತ್ರ ಧರ್ಮಸ್ಥಳಕ್ಕೆ ಕೆಟ್ಟ ಹೆಸರು ತರುವ ಪ್ರಯತ್ನಗಳು ನಡೆಯುತ್ತಿವೆ. ಯಾರು ಏನೇ ಪಿತೂರಿ ಮಾಡಿದರೂ ಕ್ಷೇತ್ರಕ್ಕೆ ಕಳಂಕ ತರುವುದಕ್ಕೆ ಸಾಧ್ಯವಿಲ್ಲ. ನಮ್ಮ ಧರ್ಮ ಸಂರಕ್ಷಣೆ ನಮ್ಮ ಹೊಣೆ. ಈ ನಿಟ್ಟಿನಲ್ಲಿ ಬೆಂಗಳೂರಿನಿಂದ ನೂರಾರು ವಾಹನಗಳಲ್ಲಿ ಸಾವಿರಾರು ಭಕ್ತರು ಧರ್ಮಸ್ಥಳಕ್ಕೆ ತೆರಳುತ್ತಿದ್ದೇವೆ ಎಂದು ಹೇಳಿದರು.

ಮುಂಬರುವ ವಿಧಾನಸಭಾ ಚುನಾವಣೆಗೆ ಉಲ್ಲೇಖ ಮಾಡಿ ಅವರು, ಸಕಲೇಶಪುರದ ಶಾಸಕ ಸಿಮೆಂಟ್ ಮಂಜು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ. ಬಿಜೆಪಿ ಮತ್ತೊಮ್ಮೆ ಗೆಲುವು ಸಾಧಿಸುವುದು ನಿಶ್ಚಿತ. ಸಿಮೆಂಟ್ ಮಂಜು ಮತ್ತೆ ಗೆದ್ದರೆ, ಅವರಿಗೆ ಉನ್ನತ ಹುದ್ದೆ ಸಿಗುವುದು ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ತಾಲ್ಲೂಕು ಬಿಜೆಪಿ ಕಾರ್ಯಕರ್ತರು ಯಾತ್ರೆಯಲ್ಲಿ ಭಾಗವಹಿಸುತ್ತಿದ್ದ ಭಕ್ತರಿಗೆ ಪು?ಷ್ಪಾರ್ಚನೆ ಮಾಡಿ ಭವ್ಯ ಸ್ವಾಗತ ಕೋರಿದರು.

ಶಾಸಕ ಸಿಮೆಂಟ್ ಮಂಜು, ಬಿಜೆಪಿ ತಾಲ್ಲೂಕು ಮಂಡಲದ ಅಧ್ಯಕ್ಷ ವಳಲಹಳ್ಳಿ ಅಶ್ವಥ್, ನಗರಾಧ್ಯಕ್ಷ ಲೋಕೇಶ್ ಜಿಲ್ಲಾ ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ನೇತ್ರಾವತಿ ಮಂಜುನಾಥ್ ಹಾಗೂ ಇತರರಿದ್ದರು.

ಧರ್ಮಸ್ಥಳ ವಿರುದ್ಧ ಪಿತೂರಿ ಮಾಡಿದವರಿಗೆ ಶಿಕ್ಷೆಯಾಗಲಿ

ಧರ್ಮಾಧಿಕಾರಿ ಹೆಸರಿಗೆ ಮಸಿ ಬಳಿಯುವ ಯತ್ನ : ಶಾಸಕ ಬಾಲಕೃಷ್ಣ ಆಕ್ರೋಶ

ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಚನ್ನರಾಯಪಟ್ಟಣ: ಹಿಂದುಗಳ ಪವಿತ್ರ ಕ್ಷೇತ್ರದ ಧರ್ಮಸ್ಥಳದ ವಿರುದ್ಧ ಇಲ್ಲಸಲ್ಲದ ಆಪಾದನೆ ಮಾಡುತ್ತಿರುವವರ ವಿರುದ್ಧ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಆಗ್ರಹಿಸಿದರು.

ಪಟ್ಟಣದ ಗಣಪತಿ ಪೆಂಡಾಲ್‌ನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ ಯೋಜನಾ ಕಚೇರಿ ವತಿಯಿಂದ ಶನಿವಾರ ಆಯೋಜಿಸಿದ್ದ ಸುಜ್ಞಾನ ನಿಧಿ ಶಿಷ್ಯ ವೇತನದ ಮಂಜೂರಾತಿ ಪತ್ರ ವಿತರಣೆ ಮತ್ತು ಸ್ವಾಸ್ಥ ಸಂಕಲ್ಪ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಧರ್ಮಸ್ಥಳದ ಡಾ. ವೀರೇಂದ್ರ ಹೆಗ್ಗಡೆ ಮತ್ತು ಕುಟುಂಬದವರ ಹೆಸರಿಗೆ ಕಳಂಕ ತರುವ ಹಾಗೂ ಕೋಟ್ಯಂತರ ಭಕ್ತರ ಭಾವನೆಗೆ ಧಕ್ಕೆ ತರುವ ಷಡ್ಯಂತ್ರ ನಡೆಯುತ್ತಿದೆ. ರಾಜ್ಯ ಸರ್ಕಾರ ಕೂಡಲೇ ಕಿಡಿಗೇಡಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ.ವೀರೇಂದ್ರ ಹೆಗ್ಗಡೆ ನೇತೃತ್ವದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ರಾಜ್ಯಾದ್ಯಂತ ಸೇವೆ ಸಲ್ಲಿಸುತ್ತಿದೆ. ಸರ್ಕಾರ ನಿರ್ವಹಿಸಬೇಕಾದ ಕೆಲಸಕ್ಕಿಂತ ಹೆಚ್ಚಿನ ಕಾರ್ಯಕ್ರಮ ಯೋಜನೆಯಿಂದ ಹಮ್ಮಿಕೊಳ್ಳುತ್ತಿರುವುದರಿಂದ ಸಾರ್ವಜನಿಕರು ಹೆಚ್ಚು ಸವಲತ್ತುಗಳನ್ನು ಪಡೆದು ಸಬಲರಾಗುತ್ತಿದ್ದಾರೆ. ಮಹಿಳೆಯರನ್ನು ಜಾಗೃತಿಗೊಳಿಸಿ ಆರ್ಥಿಕ ಪ್ರಜ್ಞಾವಂತಿಕೆ ಬೆಳೆಸುವ ಕೆಲಸ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಾಡುತ್ತಿದೆ. ಸಮಾಜ ಮತ್ತು ಕುಟುಂಬ ಸುಧಾರಣೆಯಲ್ಲಿ ಮಹಿಳೆಯರ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

150 ಕೋಟಿ ರೂ. ಶಿಷ್ಯ ವೇತನ:

ಮಹಿಳೆಯರಲ್ಲಿ ಆತ್ಮವಿಶ್ವಾಸ ಮೂಡಿಸಿದಾಗ ಮಾತ್ರ ಸಮಗ್ರ ಅಭಿವೃದ್ಧಿ ಸಾಧ್ಯವೆಂದು ನಂಬಿರುವ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಬೆನ್ನೆಲುಬಾಗಿ ನಿಂತಿದೆ. ಸದಸ್ಯರಿಗೆ ಆರ್ಥಿಕ ಸಹಕಾರ ನೀಡುವುದರ ಜೊತೆಗೆ ವ್ಯವಹಾರದ ಶಿಸ್ತು, ಸಂಸಾರ ನಿರ್ವಹಣೆ ಹಾಗೂ ಸಂಸ್ಕಾರಯುತ ಜೀವನ ಮೌಲ್ಯಗಳನ್ನು ಕಲಿಸಿಕೊಡುತ್ತಿರುವ ಸಂಸ್ಥೆಯಲ್ಲಿ ಗ್ರಾಮಾಭ್ಯುದಯ, ಆರ್ಥಿಕ ಸಬಲತೆ, ಕೃಷಿ, ಸಾಮಾಜಿಕ ಕ್ಷೇತ್ರ, ಜನರ ಜೀವನಮಟ್ಟ ಸುಧಾರಣೆ ಸೇರಿದಂತೆ ಹಲವು ಸಮಾಜಮುಖಿ ಚಿಂತನೆಗಳೊಂದಿಗೆ ಹಲವಾರು ಕಾರ್ಯಕ್ರಮಗಳು ಸಮಾಜದ ದುರ್ಬಲ ವರ್ಗದವರಿಗೆ ಆಶಾಕಿರಣವಾಗಿದೆ. ರಾಜ್ಯದಲ್ಲಿ 25 ಲಕ್ಷ ವಿದ್ಯಾರ್ಥಿಗಳಿಗೆ ಇದುವರೆಗೆ 150 ಕೋಟಿ ರೂ. ಮೊತ್ತದ ಶಿಷ್ಯ ವೇತನ ವಿನಿಯೋಗವಾಗಿದೆ. ತಾಲೂಕಿನಲ್ಲಿ 231 ವಿದ್ಯಾರ್ಥಿಗಳಿಗೆ ಶಿಷ್ಯ ವೇತನದ ದೊರೆಕಿದೆ. ಉತ್ತಮ ಶಿಕ್ಷಣ ಪಡೆದರೆ ಸಮಾಜದ ನಾನಾ ಕ್ಷೇತ್ರಗಳಲ್ಲಿ ಸಾಧನೆ ಮಾಡಲು ಸಾಧ್ಯ ಆರ್ಥಿಕ ಸಮಸ್ಯೆ ಇತರೆ ಕಾರಣಗಳಿಗೆ ಸಂಸ್ಥೆ ವತಿಯಿಂದ ಯೋಜನೆಯ ಪಾಲುದಾರ ಕುಟುಂಬದ ಮಕ್ಕಳ ತಾಂತ್ರಿಕ ಹಾಗೂ ವೃತ್ತಿಪರ ಶಿಕ್ಷಣಕ್ಕೆ ಅನುಕೂಲವಾಗುವಂತೆ ಸುಜ್ಞಾನ ನಿಧಿ ಶಿಷ್ಯ ವೇತನ ನೀಡಲಾಗುತ್ತಿದೆ. ವಿದ್ಯಾರ್ಥಿಗಳು ಸೌಲಭ್ಯದ ಸದುಪಯೋಗ ಪಡೆದು ನೌಕರಿ ಪಡೆದು, ನಂತರದಲ್ಲಿ ತಮ್ಮಂತೆ ಸಂಕಷ್ಟದಲ್ಲಿರುವ ವಿದ್ಯಾರ್ಥಿಗಳಿಗೆ ನೆರವಾಗಬೇಕು ಎಂದು ಸಲಹೆ ನೀಡಿದರು.

ಡಿವೈಎಸ್ಪಿ ಎನ್. ಕುಮಾರ್ ಮಾತನಾಡಿದರು. 110 ವಿದ್ಯಾರ್ಥಿಗಳಿಗೆ ಸುಜ್ಞಾನ ನಿಧಿ ಮಂಜೂರಾತಿ ಪತ್ರ ವಿತರಿಸಲಾಯಿತು. ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲ್ಲೂಕು ನಿರ್ದೇಶಕ ಯೋಗೀಶ್, ಜನಜಾಗೃತಿ ಸಮಿತಿಯ ಸದಸ್ಯರಾದ ಸಿ.ಎನ್. ಅಶೋಕ್, ಮನೋಹರ್ ಉಮೇಶ್ ಮತ್ತಿತರರಿದ್ದರು.

ಹಾಸನದ ಮನೆಯೊಂದರಲ್ಲಿ 1 ಕೆ.ಜಿ. ಚಿನ್ನ, 15 ಲಕ್ಷ ರೂ. ಕಳವು



ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಹಾಸನ: ಸದಾಶಿವ ನಗರದ ಮನೆಯಲ್ಲಿ ಅಂದಾಜು ಒಂದು ಕೆಜಿ ಚಿನ್ನ, 15 ಲಕ್ಷ ರೂ. ಹಣ ಕಳವು ಮಾಡಿದ್ದು, ಚಾಲಾಕಿ ಕಳ್ಳರು ನಕಲಿ ಚಿನ್ನಾಭರಣವನ್ನು ಮನೆಯೊಳಗಿಟ್ಟು ತಮ್ಮ ಕರಾಮತ್ತು ಪ್ರದರ್ಶಿಸಿದ್ದಾರೆ.

ಖಾಸಗಿ ಬ್ಯಾಂಕ್ ಉದ್ಯೋಗಿ ನವೀನ್ ಎಂಬುವರ ಮನೆಯಲ್ಲಿ ಈ ಕೃತ್ಯ ನಡೆದಿದೆ. ವರ ಮಹಾಲಕ್ಷ್ಮಿ ಹಬ್ಬಕ್ಕೆಂದು ಬ್ಯಾಂಕ್ ಲಾಕರ್‌ನಿಂದ ಕೋಟ್ಯಂತರ ರೂ. ಬೆಲೆ ಬಾಳುವ ಚಿನ್ನ, ಬೆಳ್ಳಿ ಆಭರಣ ಮನೆಗೆ ತರಲಾಗಿತ್ತು. ಗುರುವಾರ ರಾತ್ರಿ ಮನೆಗೆ ಬೀಗ ಹಾಕಿ ಇಡೀ ಕುಟುಂಬ ಹೊರ ಹೋಗಿತ್ತು. ಶನಿವಾರ ಬೆಳಿಗ್ಗೆ 8 ಗಂಟೆಗೆ ಮನೆಗೆ ಬಂದು ನೋಡಿದಾಗ ಕಳ್ಳತನವಾಗಿರುವುದು ಗೊತ್ತಾಗಿದೆ.

ಮನೆಯ ಬಾಗಿಲು ಮುರಿದು ಒಳ ನುಗ್ಗಿರುವ ಕಳ್ಳರು, ನಗದು ಹಾಗೂ ಚಿನ್ನಾಭರಣ ದೋಚಿ ಎಸ್ಕೇಪ್ ಆಗಿದ್ದಾರೆ.

ಪತ್ನಿ ತಾಯಿಯ ಮನೆಯಲ್ಲೇ ನವೀನ್ ಕುಟುಂಬ ಸಮೇತರಾಗಿ ವಾಸವಾಗಿದ್ದರು. ತಾವು ವಾಸವಿದ್ದ ಮನೆಯ ಎದುರಿನಲ್ಲೇ ನವೀನ್ ಹೊಸ ಮನೆ ನಿರ್ಮಾಣ ಮಾಡುತ್ತಿದ್ದಾರೆ. ಆ ಹೊಸ ಮನೆಯ ಕಾಮಗಾರಿಗಾಗಿ ಹಣವನ್ನು ಮನೆಯಲ್ಲಿ ಇಟ್ಟಿದ್ದರು. ಒಂದು ರಾತ್ರಿ ಮನೆಯಲ್ಲಿ ಯಾರೂ ಇಲ್ಲದ್ದನ್ನ ಗಮನಿಸಿದ ಚೋರರು ಕಳ್ಳತನ ಮಾಡಿದ್ದಾರೆ. ಸ್ಥಳಕ್ಕೆ ಪೆನ್ಷನ್ ಮೊಹಲ್ಲಾ ಠಾಣೆ ಪೊಲೀಸರು, ಶ್ವಾನದಳ, ಬೆರಳಚ್ಚು ತಜ್ಞರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಖದೀಮರ ಪತ್ತೆಗೆ ಎಸ್ಪಿ ಮೊಹಮದ್ ಸುಜೀತಾ ಅವರು ವಿಶೇಷ ತನಿಖಾ ತಂಡ ರಚನೆ ಮಾಡಿದ್ದು, ಆರೋಪಿಗಳ ಪತ್ತೆಗೆ ಖಾಕಿ ಪಡೆ ಬಲೆ ಬೀಸಿದೆ.

3.5 ಲಕ್ಷ ರೂ. ಮೌಲ್ಯದ ಒಡವೆ ಕಳವು

ಮತ್ತೊಂದು ಪ್ರಕರಣದಲ್ಲಿ ಮನೆಯ ಬಾಗಿಲು ಮುರಿದು ಸುಮಾರು 3.50 ಲಕ್ಷ ರೂ. ಚಿನ್ನದ ಒಡವೆ ಹಾಗೂ 5 ಸಾವಿರ ನಗದು ದೋಚಿರುವ ಘಟನೆ ಬೇಲೂರು ತಾಲ್ಲೂಕು ಹಳೇಬೀಡಿನ ಕಲ್ಲುಮಠ ಬೀದಿಯಲ್ಲಿ ನಡೆದಿದೆ. ಮಂಜಪ್ಪ ಮತ್ತು ಪತ್ನಿ ಪ್ರೇಮಲೀಲಾ ಅವರು ಆ.22 ರಂದು ಬೆಳಿಗ್ಗೆ ಮನೆಗೆ ಬೀಗ ಹಾಕಿಕೊಂಡು ಜಾವಗಲ್ ಸರ್ಕಲ್ ನಲ್ಲಿರುವ ತಾವು ನಡೆಸುತ್ತಿರುವ ಅರ್ಪಿತಾ ಮೆಡಿಕಲ್ ಸ್ಟೋರ್‌ಗೆ ಹೋಗಿದ್ದರು. ಮಧ್ಯಾಹ್ನ ಮೆಡಿಕಲ್ ಸ್ಟೋರ್‌ಗೆ ಬೀಗ ಹಾಕಿಕೊಂಡು ಊಟಕ್ಕೆಂದು ಮನೆಗೆ ಬಂದಾಗ ಮನೆಯ ಮೇಲ್ಭಾಗದ ಬಾಗಿಲನ್ನು ಕಳ್ಳರು ಆಯುಧದಿಂದ ಮೀಟಿ ತೆಗೆದು ಒಳಗೆ ಪ್ರವೇಶಿಸಿ ಒಳಗಿದ್ದ 2 ಗಾಡ್ರೇಜ್ ಬೀರು ಒಡೆದು ಅದರಲ್ಲಿದ್ದ 30 ಗ್ರಾಂ. ತೂಕದ ಲಾಂಗ್ ಸರ, 3 ಗ್ರಾಂ.ತೂಕದ ಗುಂಡಿನ ಚೈನ್, 10 ಗ್ರಾಂ.ತೂಕದ ಬೆಳ್ಳಿಯ ಪೆಂಡೆಂಟ್, 2 ಉಂಗುರ, 6 ಗ್ರಾಂ.ತೂಕದ 1 ಮೂಗುತಿ ಹಾಗೂ ನಗದು ದೋಚಿ ಎಸ್ಕೇಪ್ ಆಗಿದ್ದಾರೆ. ಹಳೇಬೀಡು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬೇಲೂರು: ನಾಳೆ ಧರ್ಮಸ್ಥಳಕ್ಕೆ ಜಾಥಾ

ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಬೇಲೂರು: ಧರ್ಮಸ್ಥಳ ಕ್ಷೇತ್ರದ ಕುರಿತು ನಡೆಯುತ್ತಿರುವ ಅಪಪ್ರಚಾರ ಖಂಡಿಸಿ ಶಾಸಕ ಹೆಚ್.ಕೆ. ಸುರೇಶ್ ನೇತೃತ್ವದಲ್ಲಿ ಆ. 25ರ ಸೋಮವಾರ ಧರ್ಮಸ್ಥಳಕ್ಕೆ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದು ತಾಲ್ಲೂಕು ಬಿಜೆಪಿ ಅಧ್ಯಕ್ಷ ಸಂಜಯ್ ಕೌರಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಶನಿವಾರ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಧರ್ಮಸ್ಥಳದ ವಿಚಾರವಾಗಿ ಸಾಕಷ್ಟು ಅಪಪ್ರಚಾರ ನಡೆಯುತ್ತಿದೆ. ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯೂ ಮಹಿಳಾ ಸಬಲೀಕರಣದೊಂದಿಗೆ ಎಲ್ಲ ಕ್ಷೇತ್ರದಲ್ಲೂ ಉತ್ತಮ ಕೆಲಸ ಮಾಡುತ್ತ

ಕನ್ನಡ ಪೋಸ್ಟ್

E-mail : kannadapostnews@gmail.com facebook.com / ಕನ್ನಡ post

ಸಕಾಲಕ್ಕೆ ಸಾಲ ಮರುಪಾವತಿಸಿದರೆ ಬ್ಯಾಂಕ್‌ಗಳಿಗೆ ಅನುಕೂಲ

ಕನ್ನಡ ಪೋಸ್ಟ್‌ನ್ಯೂಸ್ ನೆಟ್‌ವರ್ಕ್



ಚನ್ನರಾಯಪಟ್ಟಣ: ರೈತರು ಪಡೆದ ಸಾಲವನ್ನು ಸಕಾಲದಲ್ಲಿ ಮರುಪಾವತಿ ಮಾಡುವುದನ್ನು ರೂಢಿಸಿಕೊಂಡರೆ ಬ್ಯಾಂಕ್ ಬೆಳವಣಿಗೆಯಾಗುವುದರ ಜೊತೆಗೆ ರೈತರಿಗೆ ಮತ್ತಷ್ಟು ಸಾಲ ನೀಡಲು ಅನುಕೂಲವಾಗುತ್ತದೆ ಎಂದು ಪಟ್ಟಣದ ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ಬಿ.ಎನ್. ಮಂಜುನಾಥ್ ತಿಳಿಸಿದರು.

ಬ್ಯಾಂಕ್‌ನ ಆವರಣದಲ್ಲಿ ನಡೆದ 2024-25ನೇ ಸಾಲಿನ ಸರ್ವ ಸದಸ್ಯರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, 1937ರಲ್ಲಿ ಆರಂಭವಾದ ಬ್ಯಾಂಕ್ ತಾಲ್ಲೂಕಿನ ಸಾವಿರಾರು ರೈತರಿಗೆ ಮಧ್ಯಮ ಮತ್ತು ದೀರ್ಘಾವಧಿ ಸಾಲಗಳನ್ನು ನೀಡುತ್ತಾ ಬರಲಾಗಿದೆ. ಹಿಂದಿನ ಎಲ್ಲ ಅಧ್ಯಕ್ಷರು, ನಿರ್ದೇಶಕರ ಸಹಕಾರದಿಂದ ನಿರ್ದಿಷ್ಟ ಲಾಭ ಮಾಡಿಕೊಂಡು ಬರಲಾಗುತ್ತಿದೆ. ಬ್ಯಾಂಕ್ ಸುದೀರ್ಘ ಅವಧಿಗೆ ಉತ್ತಮವಾಗಿ ನಡೆಸಿಕೊಂಡು ಹೋಗಬೇಕಾದ್ದಲ್ಲಿ ಸುಸ್ತಿದಾರರು ಪಡೆದ ಸಾಲವನ್ನು ಸರಿಯಾಗಿ ಮರುಪಾವತಿ ಮಾಡಿದಾಗ ಮಾತ್ರ ರಾಜ್ಯದಲ್ಲಿ 200 ಪಿಕಾರ್ಡ್ ಬ್ಯಾಂಕ್‌ಗಳಿದ್ದರೂ, 57 ಬ್ಯಾಂಕ್‌ಗಳಿಗೆ ಮಾತ್ರ ಸಾಲ ಕೊಡುವ ದೃಢತೆ ಇರುವುದು, ಆ ಸಾಲಿನಲ್ಲಿರುವ ನಮ್ಮ ಚನ್ನರಾಯಪಟ್ಟಣದ ಪಿಕಾರ್ಡ್ ಬ್ಯಾಂಕ್‌ನ್ನು ಉಳಿಸಿ, ಬೆಳೆಸಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿ ಎಂದರು.

ರಾಜ್ಯದಲ್ಲಿ ಪಿಕಾರ್ಡ್ ಬ್ಯಾಂಕ್‌ಗಳನ್ನು ಮತ್ತೊಂದು ಬ್ಯಾಂಕ್‌ನೊಂದಿಗೆ ವಿಲೀನಕ್ಕೆ ಸರ್ಕಾರ ಮುಂದಾಗಿತ್ತು, ರಾಜಾಧ್ಯಕ್ಷ ಷಡಕ್ಷರಿ ಅವರು ಇದಕ್ಕೆ ಅವಕಾಶ ನೀಡದೇ ಬ್ಯಾಂಕ್‌ಗಳನ್ನು ಅಭಿವೃದ್ಧಿಪಡಿಸುವ ಪಣ ತೊಟ್ಟಿದ್ದಾರೆ. ಸರ್ಕಾರ ಮೂರನೇ ಬಾರಿಗೆ ಹಣ ಒದಗಿಸಿದ್ದು, ಆದರಲ್ಲಿ ನೀಡಲಾಗುತ್ತಿರುವ ಹೊಸ ಸಾಲವೀಗ ಸಕಾಲದಲ್ಲಿ ಮರುಪಾವತಿಯಾಗುತ್ತಿದೆ. ಅದರೊಂದಿಗೆ ಸರ್ಕಾರ ಎರಡು ಬಾರಿ ಮಾಡಿದ ಬಡ್ಡಿ ಮನ್ನಾದ ಪ್ರಯೋಜನದಿಂದಾಗಿ ನಿರ್ದೇಶಕರು, ಬ್ಯಾಂಕ್ ಸಿಬ್ಬಂದಿ ಸಾಲಗಾರರ ಮನಮೊಲಿಸಿ ಹಣ ಕಟ್ಟಿಸಲಾಗಿದೆ. ಬ್ಯಾಂಕ್ ಪ್ರಸಕ್ತ ಸಾಲಿನಲ್ಲಿ 9.3 ಲಕ್ಷ ನಿವ್ವಳ ಲಾಭ ದಾಖಲಿಸಿದೆ ಎಂದರು.

ಮಾಜಿ ಶಾಸಕ ಸಿ.ಎಸ್. ಪುಟ್ಟೇಗೌಡ ಮಾತನಾಡಿ, ಹಿಂದೆ ಸಾಲ ಮಾಡುವುದು ಎಂದರೇ ಹೆದರುವ ಕಾಲವಿತ್ತು, ಸಾಲ ಮಾಡಿದ್ದಾರೆ ಅಂದ್ರೆ ನೆರೆಹೊರೆಯವರ ಬಾಯಿಗೆ ಆಹಾರವಾಗುತ್ತಿದ್ದವು. ಇದೀಗ ಸಾಲ ಇಲ್ಲದ ರೈತನಿಲ್ಲ, ಮನೆಯಿಲ್ಲ, ಜನರಿಗೆ ಸುಲಭವಾಗಿ ಸಾಲ ಸಿಗುವ ವ್ಯವಸ್ಥೆ ಇದೆ. ಇದರ ದುರುಪಯೋಗವಾಗಬಾರದು, ಸಾಲ ಕಟ್ಟದಿದ್ದರೇ ಇಂತಹ ಸ್ಥಳೀಯ ಸಂಸ್ಥೆಗಳು ಬಾಗಿಲು ಮುಚ್ಚಬೇಕಾಗುತ್ತದೆ. ಅದರಿಂದ ಪಡೆದ ಸಾಲವನ್ನು ಸಕಾಲದಲ್ಲಿ ಕಟ್ಟಿ ಬ್ಯಾಂಕ್ ಏಳಿಗೆ ಸಹಕಾರಿಯಾಗಬೇಕೆಂದರು.

ಬ್ಯಾಂಕ್‌ನ ವಾರ್ಷಿಕ ವರದಿಯನ್ನು ವ್ಯವಸ್ಥಾಪಕ ಎಂ.ಎಸ್. ಧರ್ಮ ಸಭೆಗೆ ಮಂಡಿಸಿದರು.

ಆಡಳಿತ ಮಂಡಳಿಯ ಉಪಾಧ್ಯಕ್ಷ ಎಂ.ಆರ್. ಮಂಜುನಾಥ್, ನಿರ್ದೇಶಕರಾದ ಎನ್.ಟಿ. ಬೊಮ್ಮೇಗೌಡ, ನಂಜುಂಡೇಗೌಡ, ಎಂ.ಶಂಕರ್, ಕೆ.ಟಿ. ನಟೇಶ್, ಕೆ.ಆರ್. ಬಾಬು, ಎಸ್.ಕೆ. ರಾಘವೇಂದ್ರ, ಮಧುಕುಮಾರ್, ಎ.ಬಿ. ನಂಜುಂಡೇಗೌಡ, ಎಂ.ಎ. ಕುಮಾರಸ್ವಾಮಿ, ಕನ್ಯಾಕುಮಾರಿ, ಬ್ಯಾಂಕ್‌ನ ವ್ಯವಸ್ಥಾಪಕ ಎಂ.ಎಸ್. ಮಧು, ಸಿಬ್ಬಂದಿ ದೇವರಾಜ್, ಎಂ.ಎಸ್. ಪುನೀತ್‌ಕುಮಾರ್ ಇದ್ದರು.

ಪರಿಸರ ಸ್ನೇಹಿ ಗಣೇಶೋತ್ಸವಕ್ಕೆ ಸಲಹೆ

ಕನ್ನಡ ಪೋಸ್ಟ್‌ನ್ಯೂಸ್ ನೆಟ್‌ವರ್ಕ್

ಕೊಣನೂರು: ಮಣ್ಣಿನಲ್ಲಿ ತಯಾರಾದ ಗಣೇಶ ಮೂರ್ತಿ ಪ್ರತಿಷ್ಠಾಪಿಸುವುದರ ಮೂಲಕ ಪರಿಸರ ಸ್ನೇಹಿ ಹಬ್ಬ ಆಚರಿಸಬೇಕು ಎಂದು ಸ್ವಸ್ಥ ಸಮಾಜ ನಿರ್ಮಾಣ ವೇದಿಕೆ ಸಂಸ್ಥಾಪಕ ಪ್ರದೀಪ್ ರಾಮಸ್ವಾಮಿ ಹೇಳಿದರು.

ಪಟ್ಟಣದ ಗಣಪತಿ ಪೆಂಡಾಲ್‌ನಲ್ಲಿ ಹಮ್ಮಿಕೊಂಡಿದ್ದ ಪರಿಸರ ಸ್ನೇಹಿ ಗಣೇಶ ವಿಗ್ರಹ ತಯಾರಿಕಾ ಕಾರ್ಯಗಾರ ಉದ್ಘಾಟಿಸಿ ಮಾತನಾಡಿ, ರಾಸಾಯನಿಕ ವಸ್ತುಗಳನ್ನು ಬಳಸಿ ಗಣಪತಿ ತಯಾರು ಮಾಡುವುದನ್ನು ನಿಲ್ಲಿಸಿ ಮಣ್ಣಿನ ಪರಿಸರ ಸ್ನೇಹಿ ಗಣೇಶ ಮೂರ್ತಿ ಪ್ರತಿಷ್ಠಾಪಿಸಿ ಎಂದು ಹೇಳಿದರು.

ರಾಸಾಯನಿಕ ವಸ್ತುಗಳನ್ನ ಬಳಸಿಕೊಂಡು ತಯಾರಿಸಿರುವ ಗಣಪತಿಯನ್ನು ನೀರಿನಲ್ಲಿ ವಿಸರ್ಜನೆ ಮಾಡಿದಾಗ ಅದು ಕರಗದೆ ಹಾಗೆ ಉಳಿದು ಹಲವಾರು ಸಮಸ್ಯೆ ಹಾಗೂ ಪರಿಸರಕ್ಕೆ ಧಕ್ಕೆಯನ್ನುಂಟು ಮಾಡುತ್ತದೆ. ಅದರ ಬದಲು ಪರಿಸರ ಸ್ನೇಹಿ ಮಣ್ಣಿನ ಗಣೇಶ ವಿಗ್ರಹವನ್ನು ಪ್ರತಿಷ್ಠಾಪಿಸಿ ಪೂಜೆ ಮಾಡಿ ಗಣೇಶ ಚತುರ್ಥಿಯನ್ನು ಆಚರಿಸಿ ಎಂದು ಹೇಳಿದರು.

ಕೊಣನೂರು ಗ್ರಾಮ ಪಂಚಾಯಿತಿ ಅಧ್ಯಕ್ಷ ನಾಗರಾಜ್ ಮಾತನಾಡಿ, ಆಯಿಲ್ ಪೇಂಟ್ ಬಳಸದೇ ಮಣ್ಣಿನಲ್ಲಿ ತಯಾರಿಸಿದ ಪರಿಸರ ಸ್ನೇಹಿ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಿ ಎಂದು ಹೇಳಿದರು.

ತಾಲ್ಲೂಕಿನ ಎಲ್ಲಾ ಶಾಲಾ ಮಕ್ಕಳು ಮಣ್ಣಿನ ಗಣೇಶ ವಿಗ್ರಹ ತಯಾರಿಕಾ ಕಾರ್ಯಗಾರದಲ್ಲಿ ಭಾಗವಹಿಸಿದ್ದರು. ಶಿಲ್ಪಿಗಳಾದ ಅರೆಮಾದನಹಳ್ಳಿ ಮಠದ ವಿಶ್ವೇಶ್ವರಯ್ಯ ಗಣೇಶ ಮೂರ್ತಿ ತಯಾರು ಮಾಡಿದರು.

ವೈಯಕ್ತಿಕ ಹಿತಾಸಕ್ತಿಗಾಗಿ ತಹಶೀಲ್ದಾರ್ ವಿರುದ್ಧ ಸುಳ್ಳು ಆರೋಪ

ಕನ್ನಡ ಪೋಸ್ಟ್‌ನ್ಯೂಸ್ ನೆಟ್‌ವರ್ಕ್

ಬೇಲೂರು: ತಮ್ಮ ಕೆಲಸ ಮಾಡಿಕೊಡಲಿಲ್ಲವೆಂದು ಸಾಲುಮರದ ತಿಮ್ಮಕ್ಕ ಅವರ ದತ್ತು ಪುತ್ರ ಉಮೇಶ್ ವೃಕ್ಷಮಾತೆಯ ಹೆಸರಿನಲ್ಲಿ ಸುಳ್ಳು ಪ್ರಚಾರ ಮಾಡುತ್ತಿದ್ದಾರೆ ಎಂದು ಪ್ರಗತಿಪರ ಹಿತರಕ್ಷಣಾ ಸಮಿತಿ ಮುಖಂಡ ಶಾಮ್ ಸುಂದರ್ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಶನಿವಾರ ಮಾತನಾಡಿ, ಸ್ವಾರ್ಥಕ್ಕಾಗಿ ವೃಕ್ಷಮಾತೆ ಸಾಲುಮರದ ತಿಮ್ಮಕ್ಕನವರ ಹೆಸರಿಗೆ ಕಳಂಕ ತರುವ ಕೆಲಸವನ್ನು ಬಳ್ಳೂರು ಉಮೇಶ್ ಮಾಡುತ್ತಿದ್ದಾರೆ. ಈ ವರ್ತನೆ ಮುಂದುವರಿದರೆ ಅವರ ವಿರುದ್ಧ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪಟ್ಟಣದ ತಾಲ್ಲೂಕು ಕಚೇರಿ ಹಿಂಭಾಗದಲ್ಲಿ ಗಿಡ-ಗಂಟಿ, ಮುಳ್ಳಿನ ಪೊದೆ ಬೆಳೆದಿದ್ದರಿಂದ ಕಚೇರಿಗೆ ಬಂದ ಕೆಲವರು ಇಲ್ಲಿಯೇ ಮಲ-ಮೂತ್ರ ವಿಸರ್ಜನೆಗೆ ಮುಂದಾಗುತ್ತಿದ್ದರು. ಅದರಿಂದ ಸುತ್ತಲು ಗಬ್ಬು ನಾರುತಿತ್ತು. ಈ ವಿಚಾರವಾಗಿ ಹಿಂದಿನ ತಹಶೀಲ್ದಾರ್‌ಗೆ ತಿಳಿಸಿದರೂ ಸ್ವಚ್ಛ ಮಾಡಿಸಿರಲಿಲ್ಲ. ಇತ್ತೀಚೆಗೆ ಬಂದಿರುವ ತಹಶೀಲ್ದಾರ್ ಶ್ರೀಧರ್ ಕಂಕಣವಾಡಿ ಕಚೇರಿ ಹಿಂಭಾಗದಲ್ಲಿದ್ದ ಗಿಂಡಗಂಟಿ ತೆರವುಗೊಳಿಸಿ ಒಳ್ಳೆಯ ಕೆಲಸ ಮಾಡಿದ್ದಾರೆ ಎಂದರು.

ತಾಲ್ಲೂಕು ಕೆಡಿಪಿ ಸದಸ್ಯ ಚೇತನ್ ಮಾತನಾಡಿ, ಬಳ್ಳೂರು ಉಮೇಶ್ ತಮ್ಮ ಕೆಲಸ ಮಾಡಿಕೊಡಲಿಲ್ಲವೆಂದು ವೈಯಕ್ತಿಕ ಹಿತಾಸಕ್ತಿಗಾಗಿ ತಹಶೀಲ್ದಾರ್ ಅವರು ಸಾಲುಮರದ ತಿಮ್ಮಕ್ಕನೆಟ್ಟಿದ್ದ ಗಿಡಗಳನ್ನು ನಾಶ ಮಾಡಿದ್ದಾರೆ ಎಂದು ಆರೋಪಿಸಿದ್ದರು. ಈ ವಿಚಾರವಾಗಿ ಕೆಲವರಿಂದ ಸುದ್ದಿಗೋಷ್ಠಿ ಮಾಡಿಸಿ ಅರಣ್ಯ ಸಚಿವರಿಗೆ ದೂರು ನೀಡಿದ್ದಾರೆ. ತಹಶೀಲ್ದಾರ್ ವಿರುದ್ಧ ಬೆಂಗಳೂರಿನ ಗಾಂಧಿ ಪ್ರತಿಮೆ ಮುಂದೆ ಪ್ರತಿಭಟಿಸುತ್ತೇನೆ ಎಂದಿದ್ದಾರೆ. ಅವರು ಪ್ರತಿಭಟಿಸುವ ದಿನವೇ ನಾಮ ಸಹ ಬಳ್ಳೂರು ಉಮೇಶ್ ವಿರುದ್ಧ ತಹಶೀಲ್ದಾರ್ ಪರವಾಗಿ ಅದೇ ಗಾಂಧಿ ಪ್ರತಿಮೆ ಮುಂದೆಯೇ ಪ್ರತಿಭಟಿಸಬೇಕಾಗುತ್ತದೆ. ಉತ್ತಮ ಕೆಲಸ ಮಾಡುವವರಿಗೆ ತೊಂದರೆ ಕೊಟ್ಟರೆ ಜನ ಸುಮ್ಮನಿರುವುದಿಲ್ಲ ಎಂದು ಎಚ್ಚರಿಸಿದರು.

ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸಚಿನ್, ಮುಖಂಡ ನಿಂಗೇಗೌಡ ಮಾತನಾಡಿ, ಸಾಲುಮರದ ತಿಮ್ಮಕ್ಕನವರ ಬಗ್ಗೆ ನಮಗೆ ಅಪಾರ ಗೌರವವಿದೆ. ಆದರೆ ಉಮೇಶ್, ತಿಮ್ಮಕ್ಕರ ಹೆಸರಿಗೆ ಮಸಿ ಬಳಿಯುವ ಕೆಲಸ ಮಾಡುತ್ತಿದ್ದಾರೆ. ಸರ್ಕಾರ ಸಾಲುಮರದ ತಿಮ್ಮಕ್ಕರಿಗೆ ನೀಡಿದ ಸರ್ಕಾರಿ ವಾಹನವನ್ನು ದುರ್ಬಳಕೆ ಮಾಡಿಕೊಂಡು ತಾವೇ ವಾಹನ ಓಡಿಸುವ ಮತ್ತು ತಮ್ಮ ಕುಟುಂಬ ಸದಸ್ಯರೊಂದಿಗೆ ಓಡಾಡಿ ಸರ್ಕಾರದ ಹಣವನ್ನು ದುಂದುವೆಚ್ಚ ಮಾಡುತ್ತಿದ್ದಾರೆ. ಈ ಬಗ್ಗೆ ನಮ್ಮಲ್ಲಿ ದಾಖಲೆಗಳಿದ್ದು, ಶೀಘ್ರವೇ ಉಮೇಶ್ ವಿರುದ್ಧ ದೂರು ನೀಡಲಾಗುವುದು ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಪ್ರಗತಿಪರ ಹಿತರಕ್ಷಣಾ ಸಮಿತಿ ಮುಖಂಡರಾದ ಗೆಂಡೇಹಳ್ಳಿ ಶ್ರೀನಿವಾಸ್, ಬಗರ್ ಹುಕುಂ ಸಮಿತಿ ಸದಸ್ಯ ಶಿವಾರಾಜ್ ಇದ್ದರು.

ಕಠಿಣ ಪರಿಶ್ರಮದಿಂದ ಬದುಕಿನಲ್ಲಿ ಯಶಸ್ಸು ಸಾಧ್ಯ: ಡಿಸಿ

ಕನ್ನಡ ಪೋಸ್ಟ್‌ನ್ಯೂಸ್ ನೆಟ್‌ವರ್ಕ್

ಹಾಸನ: ಪ್ರತಿಯೊಂದು ಮಗುವು ಉತ್ತಮ ವಿದ್ಯಾಭ್ಯಾಸದ ಮೂಲಕ ಮುಂದಿನ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲೆಯ ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಫಲಿತಾಂಶ ಹಾಗೂ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಗುಣಮಟ್ಟದ ಭೋದನೆ ಮತ್ತು ಕಲಿಕೆಗೆ ಕ್ರಮ ಕೈಗೊಳ್ಳುವ ಬಗ್ಗೆ ವಿಡಿಯೋ ಸಂವಾದದ ಮೂಲಕ ಮಕ್ಕಳನ್ನು ಕುರಿತು ಮಾತನಾಡಿದ ಅವರು, ಶಿಕ್ಷಕರು ಉತ್ತಮವಾಗಿ ಬೋಧನೆ ಮಾಡುವ ಮೂಲಕ ಮಕ್ಕಳಿಗೆ ಒಳ್ಳೆಯ ಶಿಕ್ಷಣ ನೀಡಲು ಮುತುವರ್ಜಿ ವಹಿಸುವಂತೆ ತಿಳಿಸಿದರು.

ಯಶಸ್ಸು ಕಾರ್ಯಕ್ರಮವು ಮಕ್ಕಳ ಉತ್ತಮ ಭವಿಷ್ಯಕ್ಕೆ ಬುನಾದಿ ಆಗಿದ್ದು, ಜೀವನದಲ್ಲಿ ಮಕ್ಕಳು ತಮ್ಮ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಹಕಾರಿ ಆಗುವಂತೆ ಈ ಕಾರ್ಯಕ್ರಮದ ಮೂಲಕ ಪ್ರಯತ್ನ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಒಂದು ಕಾಲದಲ್ಲಿ ಉದ್ಯೋಗಂ ಪುರುಷ ಲಕ್ಷಣಂ ಎಂದು ಹೇಳಲಾಗುತ್ತಿತ್ತು. ಆದರೆ ಇಂದಿನ ದಿನಗಳಲ್ಲಿ ಉದ್ಯೋಗ ಸರ್ವರ ಲಕ್ಷಣ ಎಂಬಂತಾಗಿದೆ. ಈ ನಿಟ್ಟಿನಲ್ಲಿ ಪ್ರತಿ ಮಗುವೂ ಹೆಣ್ಣು-ಗಂಡು ಎಂಬ ಭೇದವಿಲ್ಲದೆ ಪ್ರತಿಯೊಬ್ಬರು ಕೆಲಸ ಮಾಡುವ ಮೂಲಕ ಆರ್ಥಿಕ ಸಬಲತೆ ಸಾಧಿಸಬೇಕು ಎಂದರು.

ಎಸ್‌ಎಸ್‌ಎಲ್‌ಸಿ ಹಂತದಲ್ಲಿಯೇ ಮುಂದೆ ಯಾವ ರೀತಿಯ ಕೆಲಸ ಮಾಡಬೇಕು ಎಂದು ನಿರ್ಧರಿಸಿ ಮುಂದಿನ ವಿದ್ಯಾಭ್ಯಾಸಕ್ಕೆ ವಿಷಯಗಳನ್ನುಆಯ್ಕೆ ಮಾಡಿಕೊಂಡು ವಿದ್ಯಾಭ್ಯಾಸ ನಡೆಸಿ ಎಂದು ತಿಳಿಸಿದರಲ್ಲದೆ, ಜೀವನಕ್ಕೆ ವಿದ್ಯೆ ಭದ್ರ ಬುನಾದಿ, ವಿದ್ಯಾಭ್ಯಾಸ ಮುಗಿಸಿದ ತಕ್ಷಣ ಕೆಲಸ ದೊರೆಯುವುದಿಲ್ಲ ಲಭ್ಯವಿರುವ ಅವಕಾಶಗಳನ್ನು ಬಳಸಿಕೊಂಡು ಕೆಲಸ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಮಕ್ಕಳು ಯಾವುದೇ ನೆಪ ನೀಡಿ ಶಾಲೆಗೆ ಗೈರು ಹಾಜರಾಗಬಾರದು. ಈ ಕಾರ್ಯಕ್ರಮದ ಮೂಲಕ ಮಕ್ಕಳ ಶೈಕ್ಷಣಿಕ ಬೆಳವಣಿಗೆಗೆ ಪ್ರಯತ್ನಿಸಲಾಗಿ 6ನೇ ವಾರ ತಲುಪಿದೆ, ಜೀವನದಲ್ಲಿ ಯಶಸ್ಸು ಕಾಣಲು ಎಲ್ಲಾ ಸುಖವನ್ನು ತ್ಯಾಗ ಮಾಡಿ ಸಾಧನೆ ಮಾಡಬೇಕು. ಸಮಾಜದಲ್ಲಿ ಗೌರವ ಪಡೆಯಲು, ನೆಮ್ಮದಿ ಬದುಕು ಕಟ್ಟಿಕೊಳ್ಳಲು, ದೇಶಕ್ಕೆ ಕೊಡುಗೆ ನೀಡಲು ಒಳ್ಳೆಯ ದಾರಿ ಆಯ್ಕೆ ಮಾಡಿಕೊಂಡು ಉತ್ತಮ ದಾರಿಯಲ್ಲಿ ನಡೆಯಬೇಕು ಹಾಗೂ ಆರ್ಥಿಕ ಅಭಿವೃದ್ಧಿ ಹೊಂದಬೇಕು ಎಂದು ಸಲಹೆ ನೀಡಿದರು.

ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಬಲರಾಮ ಇತರರಿದ್ದರು.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಹಾಸನ: ಜಿಲ್ಲಾ ಬಾಬು ಜಗಜೀವನ್ ರಾಮ್ ಕ್ಷೇಮಾಭಿವೃದ್ಧಿ ಸಂಘದಿಂದ 2024-25ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ತೇರ್ಗಡೆ ಹೊಂದಿದ ಮಾದಿಗ ಸಮುದಾಯದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಎಸ್‌ಎಸ್‌ಎಲ್‌ಸಿಯಲ್ಲಿ ಶೇ. 80 ಕ್ಕಿಂತ ಅಧಿಕ, ಪಿಯುಸಿ ಕಲಾ, ವಿಜ್ಞಾನ, ವಾಣಿಜ್ಯ ವಿಭಾಗದಲ್ಲಿ ಶೇ 80 ಅಂಕ ಪಡೆದ ವಿದ್ಯಾರ್ಥಿಗಳು ಸೆ. 10ರ ಒಳಗೆ ಅರ್ಜಿ ಸಲ್ಲಿಸಬೇಕು. ಅಭ್ಯರ್ಥಿಗಳು ಖುದ್ದಾಗಿ ಅಥವಾ ಈ ಕೆಳಗೆ ತಿಳಿಸಿರುವ ವಿಳಾಸಕ್ಕೆ ಅಂಚೆ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅಂಚೆ ವಿಳಾಸ: ಬಸವರಾಜು. ಎಲ್ ಎಸ್. ಭಾಗ್ಯರಾಜು ನಿಲಯ, .2390, 2ನೇ ಕ್ರಾಸ್, ಮಾಸ್ಟರ್ ಪಿ.ಯು. ಕಾಲೇಜು ಹಿಂಭಾಗ, ವಿವೇಕ ನಗರ, ಹಾಸನ-573201 ಮುಂದುವರಿದು ಪ್ರತಿಭಾ ಪುರಸ್ಕಾರಕ್ಕೆ ಆಯ್ಕೆಯಾದ ಅಭ್ಯರ್ಥಿಗಳಿಗೆ ದೂರವಾಣಿ ಮೂಲಕ ತಿಳಿಸಲಾಗುವುದು. ಮಾಹಿತಿಗೆ 90196 38674 ಇಲ್ಲಿಗೆ ಸಂಪರ್ಕಿಸಬಹುದು.

ಹಳೇ ಬೇರು ಹೊಸ ಚಿಗುರು ಕಾರ್ಯಕ್ರಮ

ಹಾಸನ: ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ವತಿಯಿಂದ ಆಚಾರ್ಯ ವಾಣಿಜ್ಯ ವಿದ್ಯಾ ಸಂಸ್ಥೆಯಲ್ಲಿ ವಿನೂತನ ಹಳೇ ಬೇರು ಹೊಸ ಚಿಗುರು ಕಾರ್ಯಕ್ರಮವನ್ನು ಸೆ.6 ಶನಿವಾರದಂದು ಏರ್ಪಡಿಸಲಾಗಿದೆ.ಕಾಲೇಜಿನ ಪ್ರತಿಭಾನ್ವಿತ ಸಾಹಿತ್ಯಾಸಕ್ತ ವಿದ್ಯಾರ್ಥಿಗಳು ಸ್ವ ರಚಿತ ಚುಟುಕು ವಾಚನ ಮಾಡುವರು. ವಿವಿಧ ಜಿಲ್ಲೆಗಳ ಕವಿಗಳು ಆಗಮಿಸಲಿದ್ದಾರೆ. ಚುಟುಕು ಸಾಹಿತ್ಯದ ಗಮ್ಯತೆ ಹಾಗೂ ಪ್ರಭಾವ ವಿಷಯದ ಕುರಿತು ಉಪನ್ಯಾಸ ಕಾರ್ಯಕ್ರಮದೊಂದಿಗೆ ರಾಜ್ಯ ಮಟ್ಟದ ಚುಟುಕು ಕವಿಗೋಷ್ಠಿ ಏರ್ಪಡಿಸಲಾಗಿದೆ ಎಂದು ಆಚಾರ್ಯ ವಾಣಿಜ್ಯ ವಿದ್ಯಾ ಸಂಸ್ಥೆಯ ಪ್ರಾಚಾರ್ಯ ಡಾ. ಹೆಚ್.ಆರ್. ಆದರ್ಶ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇತಿಹಾಸದಲ್ಲಿ ಈ ದಿನ

ಆಗಸ್ಟ್-24

1608: ಇಂಗ್ಲಿಷ್‌ರ ಮೊದಲ ನೌಕಾಪಡೆ ಸುರತ್ ಬಂದರು ತಲುಪಿತು.

1947: ಪಾಕಿಸ್ತಾನ ತನ್ನ ಹೊಸ ರಾಷ್ಟ್ರೀಯ ಗೀತೆಯನ್ನು ಅಂಗೀಕರಿಸಿತು.

2006: ಅಂತಾರಾಷ್ಟ್ರೀಯ ಖಗೋಳಶಾಸ್ತ್ರ ಸಂಘವು ಪ್ಲೂಟೋ ಅನ್ನು ಗ್ರಹ ಪಟ್ಟಿಯಿಂದ ತೆಗೆದು ಹಾಕಿತು.

ಜನನ

1888: ಜಿ.ಜಿ. ಖೇರ್, ಬಾಂಬೆ ರಾಜ್ಯದ ಮೊದಲ ಮುಖ್ಯಮಂತ್ರಿಗಳಲ್ಲಿ ಒಬ್ಬರು

1889: ಕೆ. ಕೆಲಪ್ಪನ್, ಮಲಬಾರದ ಸ್ವಾತಂತ್ರ್ಯ ಹೋರಾಟಗಾರ, ಕೇರಳ ಗಾಂಧಿ ಎಂದು ಖ್ಯಾತರು

1911: ಬೀನಾ ದಾಸ್, ಕ್ರಾಂತಿಕಾರಿ ಸ್ವಾತಂತ್ರ್ಯ ಹೋರಾಟಗಾರ್ತಿ

1918: ಸಿಕಂದರ್ ಬಖ್ತ್, ಭಾರತದ ಹಿರಿಯ ರಾಜಕಾರಣಿ

1924: ರಾಮನಿವಾಸ್ ಮಿರ್ಧಾ, ರಾಜಸ್ತಾನದ ಪ್ರಮುಖ ರಾಜಕಾರಣಿ, ಕೇಂದ್ರ ಸಚಿವರಾಗಿ ಸೇವೆ

1946: ಕೆ.ಜೆ. ಜಾರ್ಜ್, ಕರ್ನಾಟಕದ ಹಿರಿಯ ರಾಜಕಾರಣಿ

1969: ಮುಕೇಶ್ ತಿವಾರಿ, ಭಾರತೀಯ ಚಲನಚಿತ್ರ ನಟ

ಮರಣ

2015: ವೆಂಕಟೇಶ್ ನಾಯಕ್, ಕರ್ನಾಟಕದ ಶಾಸಕ, ರೈಲು ಅಪಘಾತದಲ್ಲಿ ನಿಧನ

2019: ಅರುಣ್ ಜೇಟ್ಲಿ, ಮಾಜಿ ಕೇಂದ್ರ ಹಣಕಾಸು ಸಚಿವ

2023: ಸೀಮಾ ದಿಯೋ, ಹಿರಿಯ ಚಲನಚಿತ್ರ ನಟಿ

ಕಡಿಮೆ ಪಡಿತರ ವಿತರಿಸಿದರೆ ದಂಡ

ಕನ್ನಡ ಪೋಸ